# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:** 1. ಸರ್ಕಾರಿ ಆದೇಶ ಸಂ: LAW-LCE/214/2022 dated: 29.10.2022.
2. GOI O.M. No.1/3/2022-E-II(B) dated: 03.10.2022.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ 29.10.2022ರ ಆದೇಶದಲ್ಲಿ, ಸರ್ಕಾರದ ನೀತಿಯಂತೆ ಮತ್ತು W.P(C) No. 643/2015 ರಲ್ಲಿ ಭಾರತದ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ ನಿರ್ದೇಶನದನುಸಾರ 2016ರ ಪರಿಷ್ಕೃತ ಎನ್.ಜೆ.ಪಿ.ಸಿ. ವೇತನ ಶ್ರೇಣಿಗಳನ್ನು ರಾಜ್ಯದ ನ್ಯಾಯಾಂಗ ಸೇವೆಯ ಅಧಿಕಾರಿಗಳಿಗೆ ವಿಸ್ತರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಭಾರತ ಸರ್ಕಾರವು ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಣೆ ಮಾಡಿ ಆದೇಶಗಳನ್ನು ಹೊರಡಿಸಿರುವುದರಿಂದ ರಾಜ್ಯದ ನ್ಯಾಯಾಂಗ ಅಧಿಕಾರಿಗಳಿಗೂ ಸಹ ತುಟ್ಟಿಭತ್ಯೆಯ ಆದೇಶಗಳನ್ನು ಹೊರಡಿಸುವುದನ್ನು ಸರ್ಕಾರವು ಪರಿಗಣಿಸಿರುತ್ತದೆ.

ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 44 ಎಸ್‌ಆರ್‌ಪಿ 2022**

**ಬೆಂಗಳೂರು, ದಿನಾಂಕ: 22ನೇ ನವೆಂಬರ್ 2022**

2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳಿಗೆ ಮತ್ತು ದಿನಾಂಕ: 01.01.2016ರ ನಂತರದಲ್ಲಿ ನಿವೃತ್ತರಾದ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ ಮತ್ತು ಸಂದರ್ಭಾನುಸಾರ ಮೂಲ ಪಿಂಚಣಿಯ **ಶೇಕಡ 34 ರಿಂದ ಶೇಕಡ 38ಕ್ಕೆ 1ನೇ ಜುಲೈ 2022** ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ನ್ಯಾಯಾಂಗ ಅಧಿಕಾರಿಯು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ವೇತನ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ಮೂಲ ವೇತನಕ್ಕೆ ಸೇರಿಸತಕ್ಕದ್ದಲ್ಲ.

4. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

5. 2006ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ದಿನಾಂಕ: 01.01.2016ಕ್ಕೆ ಪೂರ್ವದಲ್ಲಿ ನಿವೃತ್ತರಾದ ನ್ಯಾಯಾಂಗ ಅಧಿಕಾರಿಗಳಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ. ಈ ಬಗ್ಗೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

6. ನವೆಂಬರ್-2022ರ ವೇತನದ ಬಟವಾಡೆಗೂ ಮೊದಲು ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು ಪಾವತಿಸತಕ್ಕದ್ದಲ್ಲ.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Umak

(ಉಮಾ.ಕೆ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

22/11

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.

2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ(ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
10. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
11. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
13. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
14. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**